**All India Radio: Bangalore**
**Regional Bulletin In Kannada**
**30.11.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.11.2025 / 6.40 p.m.**

**<><><><>**

ಮುಖ್ಯಾಂಶಗಳು

1. ಮನ್ ಕೀ ಬಾತ್ ನಲ್ಲಿ ಕರ್ನಾಟಕದ ಜೇನು ಕೃಷಿ ಕುರಿತು ಪ್ರಧಾನಿ ಮೆಚ್ಚುಗೆಗೆ ಜೇನು ಕೃಷಿಕರು ಹರ್ಷ
2. ಕಾರವಾರದ ಯುದ್ಧ ನೌಕೆ ಸಂಗ್ರಹಾಲಯದ ಬಗ್ಗೆ ಮನ್ ಕೀ ಬಾತ್ ನಲ್ಲಿ ಪ್ರಧಾನಿ ಪ್ರಸ್ತಾಪ
3. ಗ್ಯಾರಂಟಿ ಯೋಜನೆಗಳಿಗೆ ಸಂಬಂಧಪಟ್ಟ ತಾಂತ್ರಿಕ ಲೋಪದೋಷ ಶೀಘ್ರ ನಿವಾರಣೆ- ಸಚಿವ ಸತೀಶ ಜಾರಕಿಹೊಳಿ
4. ಲಕ್ನೋದಲ್ಲಿ ನಡೆದ ೧೯ನೇ ರಾಷ್ಟ್ರೀಯ ಜಾಂಬೂರಿಯಲ್ಲಿ ಕರ್ನಾಟಕ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಂದ ಉತ್ತಮ ಸಾಧನೆ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ತುಮಕೂರು ಜಿಲ್ಲೆಯ ಶಿವಗಂಗಾ ಕಳಂಜಿಯಂ ಮಹಿಳಾ ಕೃಷಿ ಉತ್ಪನ್ನ ಸಂಘ ನಡೆಸುತ್ತಿರುವ ಜೇನು ಕೃಷಿಯನ್ನು ಪ್ರಸ್ತಾಪಿಸಿದ್ದಾರೆ. ತುಮಕೂರು ತಾಲೂಕು ಗೂಳೂರಿನಲ್ಲಿ ಧಾನ್ ಫೌಂಡೇಶನ್ ನೆರವಿನೊಂದಿಗೆ ಪ್ರಾರಂಭವಾದ ಈ ಶಿವಗಂಗಾ ಕಳಂಜಿಯಂ ಸಂಸ್ಥೆಯಲ್ಲಿರುವ ಮಹಿಳೆಯರಿಗೆ ಕೇಂದ್ರ ಸರ್ಕಾರದ ಟ್ರೈಫೆಡ್ ಯೋಜನೆಯಡಿ ಜೇನು ಕೃಷಿಯ ಬಗ್ಗೆ ಕೃಷಿ ವಿಜ್ಞಾನ ಕೇಂದ್ರ ಹಾಗೂ ಧಾನ್ ಫೌಂಡೇಶನ್, ಅಗತ್ಯ ತರಬೇತಿ ಮತ್ತು ಮಾರ್ಗದರ್ಶನ ನೀಡುತ್ತಿದೆ ಎಂದು ಫೌಂಡೇಶನ್‌ನ ಪ್ರಾದೇಶಿಕ ಸಂಯೋಜಕ ವಸಂತಕುಮಾರ್ ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

**ಧ್ವನಿ : ವಸಂತ ಕುಮಾರ್, ಪ್ರಾದೇಶಿಕ ಸಂಯೋಜಕ**

ಹಿಂದುಳಿದ, ಬಡ ಮಹಿಳೆಯರಿಗೆ ಆದಾಯದ ಮೂಲವಾಗುತ್ತಿರುವ ಜೇನುಕೃಷಿಯನ್ನು ೨೦೨೩ರಲ್ಲಿ ಪ್ರಾರಂಭಿಸಿದ್ದು, ವರ್ಷಕ್ಕೆ ಒಂದು ಸಾವಿರ ಕೆ.ಜಿ ಜೇನು ಮಾರಾಟವಾಗುತ್ತಿದೆ ಎನ್ನುತ್ತಾರೆ ಶಿವಗಂಗಾ ಕಳಂಜಿಯಂ ಸಂಸ್ಥೆಯ ನಿರ್ವಾಹಕಿ ಪವಿತ್ರ.

**ಧ್ವನಿ: ಪವಿತ್ರ, ಶಿವಗಂಗಾ ಕಳಂಜಿಯಂ, ನಿರ್ವಾಹಕಿ**

<><><><>

ದಕ್ಷಿಣ ಕನ್ನಡ ಜಿಲ್ಲೆಯ ಜೇನು ಕೃಷಿಯ ಬಗ್ಗೆ ಪ್ರಧಾನಮಂತ್ರಿ ತಮ್ಮ ಮನ್ ಕೀ ಬಾತ್‌ನಲ್ಲಿ ಉಲ್ಲೇಖಿಸಿರುವುದು ಹೆಮ್ಮೆಯ ವಿಷಯ ಎಂದು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಗ್ರಾಮಜನ್ಯ ರೈತ ಸಂಘಟನೆಯ ಸ್ಥಾಪಕ ನಿರ್ದೇಶಕ ರಾಮಪ್ರತೀಕ್ ಕರಿಯಾಲ ಹರ್ಷ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಗ್ರಾಮಜನ್ಯದ ಮೂಲಕ ಹೊರತರಲಾಗುತ್ತಿರುವ ಜೇನು ತುಪ್ಪವು ಮಾರುಕಟ್ಟೆಯಲ್ಲಿ ಬ್ರಾಂಡೆಡ್ ಆಗಿ

ಗುರುತಿಸಿಕೊಂಡಿದೆ. ಆಧುನಿಕ ಸಂಸ್ಕರಣಾ ಘಟಕ, ಪ್ರಯೋಗಾಲಯ, ಬಾಟಲ್ ಸಂಗ್ರಹಣೆ ಮತ್ತು ಡಿಜಿಟಲ್ ಟ್ರ್ಯಾಕಿಂಗ್‌ನಂತಹ ಸೌಲಭ್ಯವನ್ನು ಗ್ರಾಮಜನ್ಯ ಹೊಂದಿದೆ. ನೈಸರ್ಗಿಕವಾದ ಜೇನುತುಪ್ಪವನ್ನು ಮಾರುಕಟ್ಟೆಗೆ ವಿತರಿಸುವ ಮೂಲಕ ಮನೆ ಮಾತಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ರಾಮಪ್ರತೀಕ್ ಕರಿಯಾಲ**

<><><><>

ಉತ್ತರ ಕನ್ನಡ ಜಿಲ್ಲೆಯ ಕಾರವಾರದ ರವೀಂದ್ರನಾಥ ಠಾಗೋರ್ ಸಮುದ್ರ ತೀರದಲ್ಲಿರುವ ಯುದ್ಧ ನೌಕೆ ಸಂಗ್ರಹಾಲಯದ ಬಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ತಮ್ಮ ಮನ್ ಕೀ ಬಾತ್‌ನಲ್ಲಿ ಉಲ್ಲೇಖಿಸಿರುವುದು ಅತ್ಯಂತ ಹೆಮ್ಮೆಯ ವಿಷಯ ಎಂದು ಉತ್ತರ ಕನ್ನಡ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಮಂಗಳಗೌರಿ ಭಟ್ ಹರ್ಷ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ಸಂಗ್ರಹಾಲಯ ವೀಕ್ಷಿಸಲು ಸಾಕಷ್ಟು ಸಂಖ್ಯೆಯಲ್ಲಿ ಹೊರ ಜಿಲ್ಲೆಯ ವಿದ್ಯಾರ್ಥಿಗಳು, ಸಾರ್ವಜನಿಕರು ಆಗಮಿಸುತ್ತಿದ್ದಾರೆ. ಈ ಯುದ್ಧ ನೌಕೆ ಸಂಗ್ರಹಾಲಯದ ಬಗ್ಗೆ ಮಾಹಿತಿ ನೀಡಲು ಗೈಡ್ ಸಹ ನೇಮಕ ಮಾಡಿದ್ದೇವೆ. ಪ್ರಧಾನಿಯವರು ಇದನ್ನು ಉಲ್ಲೇಖಿಸಿರುವುದರಿಂದ ಪ್ರಚಾರದ ಜೊತೆಗೆ ಪ್ರವಾಸಿಗರ ಸಂಖ್ಯೆ ಹೆಚ್ಚುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.

**ಧ್ವನಿ : ಮಂಗಳಗೌರಿ ಭಟ್, ಪ್ರವಾಸೋದ್ಯಮ ಇಲಾಖೆ**

<><><><>

ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ರಾಜ್ಯ ಸರ್ಕಾರ ದೇಶಕ್ಕೆ ಮಾದರಿಯಾಗಿದೆ. ಬರುವ ದಿನಗಳಲ್ಲಿ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಪಟ್ಟ ತಾಂತ್ರಿಕ ಲೋಪದೋಷಗಳನ್ನು ಸರಿಪಡಿಸಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಜರುಗಿದ ಪಂಚ ಗ್ಯಾರಂಟಿ ಅನುಷ್ಠಾನದ ಕುರಿತು ಕಾರ್ಯಾಗಾರ ಹಾಗೂ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗ್ಯಾರಂಟಿ ಯೋಜನೆಗಳ ಜೊತೆಗೆ ನೀರಾವರಿ, ರಸ್ತೆ, ಶಿಕ್ಷಣ ಸೇರಿದಂತೆ ಇನ್ನೂ ಅನೇಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿತ್ತಿದೆ ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದ್ದಾರೆ.

<><><><>

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆದ ೧೯ನೇ ರಾಷ್ಟ್ರೀಯ ಜಾಂಬೂರಿಯಲ್ಲಿ ಕರ್ನಾಟಕ ರಾಜ್ಯದ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಕ್ರೀಡೆ, ಸಾಂಸ್ಕೃತಿಕ ವಿಭಾಗದಲ್ಲಿ ಉತ್ತಮ ಸಾಧನೆ ಮಾಡುವುದರ ಮೂಲಕ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಅನಿಬೆಸೆಂಟ್ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರಕ್ಕೆ ಭೇಟಿ, ವೇಳೆ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಲಕ್ನೋದಲ್ಲಿ ಯಶಸ್ವಿಯಾಗಿ ೭ ದಿನಗಳ ಕಾಲ ನಡೆದ ಜಾಂಬೂರಿ ಕಾರ್ಯಕ್ರಮದಲ್ಲಿ ರಾಜ್ಯದ ೮೦೦ ಸ್ಕೌಟ್

ಅಂಡ್ ಗೈಡ್ಸ್ ವಿದ್ಯಾರ್ಥಿಗಳು, ೫೦ಕ್ಕೂ ಹೆಚ್ಚು ಶಿಕ್ಷಕರು ಭಾಗವಹಿಸಿ ಪ್ರಶಸ್ತಿಗಳನ್ನು ಗೆದ್ದಿದ್ದಾರೆ ಎಂದರು. ಕೇಂದ್ರ ಹಾಗೂ ರಾಜ್ಯ ಸರಕಾರದ ಸಹಕಾರದೊಂದಿಗೆ ಯುವ ಆಪ್ತಮಿತ್ರ ಯೋಜನೆಯಡಿ ೩ ಸಾವಿರದ ೭೦೦ ವಿದ್ಯಾರ್ಥಿಗಳಿಗೆ ೭ ದಿನಗಳ ವಿಪತ್ತು ನಿರ್ವಹಣಾ ತರಬೇತಿಯನ್ನು ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಹಕಾರದೊಂದಿಗೆ ನೀಡಲಾಗುತ್ತಿದೆ. ಈವರೆಗೆ ೧ ಸಾವಿರದ ೮೦೦ ಮಂದಿಗೆ ತರಬೇತಿ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ರಾಜ್ಯದಲ್ಲಿ ೨೬ನೇ ರಾಜ್ಯಮಟ್ಟದ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೂರಿ ಡಿಸೆಂಬರ್ ೨೭ ರಿಂದ ೭ ದಿನಗಳ ಕಾಲ ಬೆಳಗಾವಿಯಲ್ಲಿ ನಡೆಯಲಿದೆ ಎಂದು ಪಿ.ಜಿ.ಆರ್.ಸಿಂಧ್ಯಾ ತಿಳಿಸಿದರು.

<><><><>

ಯಾದಗಿರಿ ಜಿಲ್ಲೆಯ ಶಹಾಪುರ ನಗರದಲ್ಲಿ ವಾಸಿಸುತ್ತಿರುವ ಕಡು ಬಡವರಿಗೆ ಮತ್ತು ನಿವೇಶನ ರಹಿತ ದುರ್ಬಲರಿಗೆ ಸರ್ಕಾರದ ವತಿಯಿಂದ ಹಂತ ಹಂತವಾಗಿ ನಿವೇಶನಗಳನ್ನು ಒದಗಿಸಿಕೊಡುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ನಗರಸಭೆ ಆವರಣದಲ್ಲಿ ನಿವೇಶನ ರಹಿತರಿಗೆ ನಿವೇಶನ ಹಕ್ಕುಪತ್ರ ವಿತರಿಸಿ ಅವರು ಮಾತನಾಡಿದರು. ಪ್ರಸ್ತುತ ೭೪ ಮಂದಿ ಫಲಾನುಭವಿಗಳಿಗೆ ಸರ್ವೆ ನಂಬರ್ ೩೯೯ರ ಹಕ್ಕುಪತ್ರ ವಿತರಿಸಲಾಗುವುದು. ಮುಂದಿನ ದಿನಗಳಲ್ಲಿ ನಿವೇಶನರಹಿತರನ್ನು ಗುರುತಿಸಿ, ನಗರದಲ್ಲಿ ಸರ್ಕಾರಿ ಜಮೀನು ಅಥವಾ ಖಾಸಗಿಯವರಿಂದ ಜಮೀನನ್ನು ಖರೀದಿಸಿ, ಲೇಔಟ್ ನಿರ್ಮಾಣ ಮಾಡಿ, ನಿವೇಶನಗಳನ್ನು ಕಲ್ಪಿಸಲಾಗುವುದು ಎಂದರು.

<><><><>

ದಾವಣಗೆರೆ ಚನ್ನಗಿರಿ ತಾಲೂಕಿನ ಹಿರೇಮಳಲಿ ಗ್ರಾಮದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಂಡಿರುವ ದಿನದ ೨೪ ಗಂಟೆ ನೀರು ಪೂರೈಕೆ ಮಾಡುವ ಜಲ್‌ಜೀವನ್ ಮಿಷನ್ ಯೋಜನೆಯ ಯಶಸ್ವಿ ಕುರಿತು ನವದೆಹಲಿಯಲ್ಲಿ ನಡೆದ ಸುಜಲಾಂ ರಾಷ್ಟ್ರೀಯ ಶೃಂಗಸಭೆಯಲ್ಲಿ ಪ್ರಸ್ತುತಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್ ತಿಳಿಸಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿ ಕೇಂದ್ರ ಜಲಶಕ್ತಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸುಜಲಾಂ ಶೃಂಗಸಭೆಯಲ್ಲಿ ದಾವಣಗೆರೆ ಜಿಲ್ಲೆಯ ಹಿರೇಮಳಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎನ್.ರಶ್ಮಿ ಹಾಗೂ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಸಮಿತಿ ಅಧ್ಯಕ್ಷ ವಿಜಯ ನಾಯಕ್ ಭಾಗವಹಿಸಿ, ಯಶಸ್ವಿ ಅನುಷ್ಠಾನದ ಕುರಿತು ಪ್ರಸ್ತುತಪಡಿಸಿದರು ಎಂದರು.

<><><><>

ಬೆಂಗಳೂರು ಸರ್ವಜ್ಞ ನಗರದ ಜೀವನಹಳ್ಳಿಯಲ್ಲಿ ಫುಟ್ಬಾಲ್ ಟರ್ಫ್ ಹಾಗೂ ಕ್ರೀಡಾಂಗಣ ನಿರ್ಮಾಣ ಆಗಬೇಕೆಂದು ಆಗ್ರಹಿಸಿ, ಸ್ಥಳೀಯರು, ಕ್ರೀಡಾಂಗಣದ ಬಳಿ ಪ್ರತಿಭಟನೆ ನಡೆಸಿದರು. ಇಂಧನ ಸಚಿವರು ಹಾಗೂ ಸರ್ವಜ್ಞ ನಗರದ ಶಾಸಕ ಕೆ.ಜೆ.ಜಾರ್ಜ್ ಅವರ ದೂರದೃಷ್ಟಿಯ ಫಲವಾಗಿ ಜೀವನಹಳ್ಳಿಯಲ್ಲಿ ಅಂತಾರಾಷ್ಟ್ರೀಯ ಮಾನದಂಡದಲ್ಲಿ ಫುಟ್ಬಾಲ್ ಟರ್ಫ್ ನಿರ್ಮಾಣವಾಗುತ್ತಿದೆ. ಆದರೆ, ಈ ಟರ್ಫ್ ಅನುಕೂಲಸ್ಥರಿಗೆ ಮಾತ್ರವೇ ಹೊರತು, ಸಾಮಾನ್ಯರಿಗೆ ಅಲ್ಲ. ಕ್ರೀಡಾಂಗಣ ಬಳಕೆಗೆ ಹಣ ಪಡೆಯುತ್ತಾರೆ. ಎಂದು ಕೆಲವರು ಅಪಪ್ರಚಾರ

ಮಾಡಿದ್ದರು ಎಂದು ಪ್ರತಿಭಟನಾಕಾರರು ದೂರಿದ್ದು, ಇದನ್ನು ವಿರೋಧಿಸಿ, ಸರ್ವಜ್ಞನ ನಗರದ ಶಾಲಾ ಮಕ್ಕಳು ಸೇರಿದಂತೆ ಸ್ಥಳೀಯರು ಕ್ರೀಡಾಂಗಣದ ಬಳಿ ಪ್ರತಿಭಟನೆ ನಡೆಸಿದರು.

<><><><>

ಕರ್ನಾಟಕ ಆಗ್ನೇಯ ಪದವೀಧರರ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ನವೆಂಬರ್ ೨೫ ರಂದು ಪ್ರಕಟಿಸಿದೆ. ಅರ್ಹ ಮತದಾರರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಡಿಸೆಂಬರ್ ೧೦ ರವರೆಗೆ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>